# ಸಮಾಜ ಕಲ್ಯಾಣ ಇಲಾಖೆ ಪ್ರಗತಿ ಪರಿಶೀಲನಾ ಸಭೆ

ಬೆಳಗಾವಿ, 16: ಪ್ರಾದೇಶಿಕ ಆಯುಕ್ತ ಪಿ.ಎ. ಮೇಘಣ್ಣವರ ಅಧ್ಯಕ್ಷತೆಯಲ್ಲಿ ವಿಭಾಗದ ಎಲ್ಲ ಜಿಲ್ಲೆಗಳ ಸಮಾಜ ಕಲ್ಯಾಣ ಇಲಾಖೆ ಕಾರ್ಯಕ್ರಮಗಳ ಬಗ್ಗೆ ಪ್ರಗತಿ ಪರಿಶೀಲನೆ ಸಭೆ ನಿನ್ನೆ ಪ್ರಾದೇಶಿಕ ಆಯುಕ್ತರ ಕಚೇರಿಯಲ್ಲಿ ನಡೆಸಲಾಯಿತು.

ಸರ್ಕಾರದ ಆದೇಶಾನುಸಾರ ಪ್ರತಿ ತಿಂಗಳು 15ನೇ ದಿನಾಂಕದಂದು ಈ ಎಲ್ಲ ಕಾರ್ಯಕ್ರಮಗಳ ಅನುಷ್ಠಾನದ ಬಗ್ಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ, ಸಮೀಕ್ಷೆಯನ್ನು ಮಾಡಬೇಕಾಗುತ್ತದೆ. ಈ ಸಭೆಯು ನಿಯಮಿತವಾಗಿ ಜರು ಗುವಂತೆ ನೋಡಿಕೊಳ್ಳುವುದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳ ಹೊಣೆ ಗಾರಿಕೆಯಾಗಿದ್ದು, ಈ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಲು ಪ್ರಾದೇಶಿಕ ಆಯುಕ್ತ ಪಿ.ಎ. ಮೇಘಣ್ಣವರ ಸೂಚಿಸಿದರು.

ಪರಿಶಿಷ್ಟ ಜಾತಿ, ಪಂಗಡಗಳ ಜನರ ಮೇಲೆ ನಡೆಯುವ ದೌರ್ಜನ್ಯವನ್ನು ತಡೆಗಟ್ಟುವ ಹಿನ್ನೆಲೆಯಲ್ಲಿ ರೂಪಿಸಲಾಗಿರುವ ಕಾನೂನುಗಳ ಮತ್ತು ಇತರ ಉಪ ಕ್ರಮಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲು ಹಾಗೂ ಘಟನೆ ಉಂಟಾದ ಸಂದರ್ಭದಲ್ಲಿ ತೊಂದರೆಗೆ ಒಳಗಾದ ಜನರ ಕಲ್ಯಾಣಕ್ಕಾಗಿ ಸೂಕ್ತ ಪರಿಹಾರೋಪಾಯಗಳ ಬಗ್ಗೆ ಜಿಲ್ಲಾಧಿಕಾರಿಗಳು, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದ ಜಿಲ್ಲಾ ಮಟ್ಟದ ಸಮಿತಿಯು ಕ್ರಮ ಕೈಗೊಳ್ಳಬೇಕಾಗುತ್ತದೆ. ನಿಯಮಿತವಾಗಿ ಸಭೆ ನಡೆಸಿ ಪರಿಶೀಲನೆ ಮಾಡಬೇಕಾಗುತ್ತದೆ. ಈ ಸಮಿತಿಯ ಸಭೆಗಳು ನಿಯಮಿತವಾಗಿ ಜರುಗುವಂತೆ ನೋಡಿಕೊಳ್ಳಲು ಸಮಾಜಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ಇದೇ ರೀತಿ ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಹಸೀಲ್ದಾರ ನೇತೃತ್ವದ ಸಮಿತಿಯು ಸಹ ಇನ್ನು ಮುಂದೆ ಪ್ರತಿ ತಿಂಗಳು ಸಭೆ ನಡೆಸಿ, ದೌರ್ಜನ್ಯದಂತಹ ಘಟನೆಗಳು ಜರುಗದಂತೆ ಅಗತ್ಯ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಲು, ಅಗತ್ಯವಾದ ಜಾಗೃತಿ ಕಾರ್ಯಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲು ತಿಳಿಸಲಾಯಿತು.



ಎಸ್‌ಸಿಪಿ, ಟಿಎಸ್‌ಪಿ ಯೋಜನೆಗಳ ಅನುಷ್ಠಾನದ ಬಗ್ಗೆ ತಾಲೂಕು ಮಟ್ಟದಲ್ಲಿಯೂ ಸಹ ನಿಯಮಿತವಾಗಿ ಸಮೀಕ್ಷೆ ಮಾಡುವಂತೆ ಅಗತ್ಯ ಸೂಚನೆಗಳನ್ನು ಸಹ ನೀಡಲು ಸಮಾಜ ಕಲ್ಯಾಣ ಅಧಿಕಾರಿಗಳಿಗೆ ಪ್ರಾದೇಶಿಕ ಆಯುಕ್ತ ಮೇಘಣ್ಣವರ ಸೂಚಿಸಿದರು.

ಜಿಲ್ಲೆಯಲ್ಲಿ ಜರುಗುವ ದೌರ್ಜನ್ಯದ ಘಟನೆಗಳನ್ನು ನೊಂದ ಫಲಾನುಭವಿಗಳಿಗೆ ಸರ್ಕಾರದ ಮಾರ್ಗಸೂಚಿಗಳ ಅನುಸಾರವಾಗಿ ತ್ವರಿತವಾಗಿ, ವಿಳಂಬ ಮಾಡದೇ ಫಲಾನುಭವಿಗೆ ನೇರವಾಗಿ ಪರಿಹಾರವನ್ನು ಒದಗಿಸಲು ಅಧಿಕಾರಿಗಳು ಕ್ರಮ ವಹಿಸಬೇಕು. ಈ ಸಂಬಂಧವಾಗಿ ಪೋಲಿಸ್ ಇಲಾಖೆಯವರೊಂದಿಗೆ ಸಮನ್ವಯ ಸಾಧಿಸಲು ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಲು ತಿಳಿಸಿದರು.

ಎಸ್‌ಸಿಪಿ, ಟಿಎಸ್‌ಪಿ ಯೋಜನೆಗಳಲ್ಲಿ ವಿವಿಧ ಜಿಲ್ಲೆಗಳಲ್ಲಿ ಸಾಧಿಸಿದ ಪ್ರಗತಿ ಪರಿಶೀಲನೆ ಮಾಡಲಾಗಿದ್ದು, ಬೆಳಗಾವಿ, ವಿಜಾಪುರ, ಹಾವೇರಿ, ಧಾರವಾಡ ಜಿಲ್ಲೆಗಳಲ್ಲಿ ಯೋಜನೆಗಳ ಅನುಷ್ಠಾನ, ಅನುದಾನದ ಬಳಕೆಯಲ್ಲಿ ನಿರೀಕ್ಷಿತ ಪ್ರಗತಿ ಸಾಧನೆ ಆಗಿರುವುದಿಲ್ಲ. ಈ ಅಂಶವನ್ನು ಜಿಲ್ಲಾ ಮಟ್ಟದ ಸಮೀಕ್ಷಾ ಸಭೆಯಲ್ಲಿ ಚರ್ಚಿಸಿ ಪ್ರಗತಿ ಸಾಧಿಸದೇ ಇರುವ ಇಲಾಖೆಯವರಿಗೆ ಸೂಕ್ತ ಎಚ್ಚರಿಕೆ, ಸೂಚನೆಗಳನ್ನು ನೀಡುವ ಮೂಲಕ ಪ್ರಗತಿ ಸಾಧಿಸಲು ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

ಸಮಾಜ ಕಲ್ಯಾಣ ಇಲಾಖೆಯ ಮೂಲಕ ಪರಿಶಿಷ್ಟ ಜಾತಿ, ಪಂಗಡಗಳ ಜನರಿಗಾಗಿ ನಿರ್ಮಾಣ ಮಾಡಲಾಗುತ್ತಿರುವ ಸಮುದಾಯ ಭವನ ಕಾಮಗಾರಿಗಳ ಬಗ್ಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಸಭೆಯಲ್ಲಿ ಪರಿಶೀಲಿಸಲು ಸೂಚಿಸಲಾಯಿತು. ಒಂದು ವೇಳೆ ಈ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ವಿಳಂಬ ಅಥವಾ ಬಿಡುಗಡೆ ಆಗದೇ ಇರುವ ಪ್ರಕರಣಗಳು ಕಂಡು ಬಂದಲ್ಲಿ ಅಂಕಿ ಅಂಶಗಳೊಂದಿಗೆ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಸಮಾಜ ಕಲ್ಯಾಣ ಅಧಿಕಾರಿಗಳಿಗೆ ಸೂಚಿಸಲಾಯಿತು. ಈ ರೀತಿಯ ಸಮಸ್ಯೆಗಳ ಬಗ್ಗೆ ಸರಿಯಾದ ವಿವರ, ಅಂಕಿ ಅಂಶಗಳೊಂದಿಗೆ ವರದಿ ಸಲ್ಲಿಸಿದಲ್ಲಿ ಈ ಕುರಿತು ಸರ್ಕಾರದ ಗಮನ ಸೆಳೆಯಲು ಪ್ರಯತ್ನಿಸುವುದಾಗಿ ತಿಳಿಸಿದರು. ಅಂಬೇಡ್ಕರ್, ವಾಲ್ಮೀಕಿ ಅಭಿವೃದ್ಧಿ ನಿಗಮಗಳ ಮೂಲಕ ಭೂ ಒಡೆತನ ಯೋಜನೆಯ ಮೂಲಕ ಪರಿಶಿಷ್ಟ ಜಾತಿ, ಪಂಗಡದ ಜನರಿಗೆ ಜಮೀನು ಖರೀದಿ ಒದಗಿಸಲಾಗುತ್ತಿದ್ದು, ಜಮೀನು ಪಡೆದ ಫಲಾನುಭವಿಗಳಿಗೆ ಕೃಷಿ, ತೋಟಗಾರಿಕೆ ಇಲಾಖೆಯ ಮೂಲಕ ಎಸ್‌ಸಿಪಿ, ಟಿಎಸ್‌ಪಿ ಯೋಜನೆಗಳಡಿ ಸೌಲಭ್ಯಗಳನ್ನು ದೊರಕಿಸಿ ಕೊಡಲು ಸಮಾಜ ಕಲ್ಯಾಣ ಅಧಿಕಾರಿಗಳು ಕ್ರಮ ಕೈಗೊಳ್ಳುವಂತೆ ಪ್ರಾದೇಶಿಕ ಆಯುಕ್ತರು ಸೂಚಿಸಿದರು.

ಸರ್ಕಾರಿ ನೇಮಕಾತಿ ಹೊಂದಿದ ಪರಿಶಿಷ್ಟ ಜಾತಿ ಮತ್ತು ಪಂಗಡದ ಅಭ್ಯರ್ಥಿಗಳಿಗೆ ಸಿಂಧುತ್ವ ಪ್ರಮಾಣ ಪತ್ರ ನೀಡುವಲ್ಲಿ ಇಲಾಖೆಯ ಕೆಳಹಂತದಲ್ಲಿ ವಿಳಂಬ ಉಂಟು ಮಾಡುತ್ತಿರುವ ಬಗ್ಗೆ ದೂರುಗಳು ಆಕ್ಷೇಪಣೆಗಳು ಬರುತ್ತಿರುವ ವಿಷಯವನ್ನು ಎಲ್ಲ ಅಧಿಕಾರಿಗಳಿಗೆ ತಿಳಿಸುತ್ತಾ, ಸರ್ಕಾರಿ ನೇಮಕಾತಿ ಹೊಂದಿದ ಅಭ್ಯರ್ಥಿಗಳಿಗೆ ಸಕಾಲದಲ್ಲಿ ಸಿಂಧುತ್ವ ಪ್ರಮಾಣ ಪತ್ರ ನೀಡುವುದು ಇಲಾಖೆಯ ಜವಾಬ್ದಾರಿಯಾಗಿದ್ದು, ಈ ನಿಟ್ಟಿನಲ್ಲಿ ಇಲಾಖೆಯ ಅಧೀನ ಸಿಬ್ಬಂದಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿ, ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಮೇಘಣ್ಣವರ ಹೇಳಿದರು.

ಹೆಚ್ಚುವರಿ ಆಯುಕ್ತ ರಮೇಶ ಕಳಸದ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಉಮಾ ಸಾಲಿಗೌಡರ, ಜಂಟಿ ನಿರ್ದೇಶಕ ಮುನಿರಾಜು, ವಿಭಾಗದ ಜಿಲ್ಲೆಗಳ ಎಲ್ಲ ಸಮಾಜ ಕಲ್ಯಾಣ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

Scanned by CamScanner